**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 4/23**

**ಸಿ.ಡಬ್ಲ್ಯೂ-5 ಪಿ.ಡಬ್ಲ್ಯೂ-5**

| | | |
|---|---|---|
| ಸಾಕ್ಷಿದಾರರ ಹೆಸರು | : | ಲಿಂಗನಾಯಕ |
| ತಂದೆಯ/ ಗಂಡನ ಹೆಸರು | : | ಕೆಂಪನಾಯಕ |
| ವಯಸ್ಸು | : | 68 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಬೀದರಹಳ್ಳಿ |

**ದಿನಾಂಕ 18.09.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಿಪಿ 2 ರಲ್ಲಿ ಇರುವ ಸಾಕ್ಷಿ ಸಹಿಯನ್ನು ನಿಪಿ 2 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 3 ವರ್ಷಗಳ ಹಿಂದೆ ಚಾಸಾ 2 ರವರ ಜಮೀನಿನಲ್ಲಿ ಮಾಡಿರುತ್ತೇನೆ. ಚಾಸಾ 1 ಮತ್ತು ಆರೋಪಿತರಿಗೂ ಗಲಾಟೆ ಆಗಿರುವ ವಿಚಾರವಾಗಿ ಸಹಿ ಮಾಡಿರುತ್ತೇನೆ. ನಿಪಿ 2 ಕ್ಕೆ ನಾನು ಮತ್ತು ಚಾಸಾ3 ರವರು ಸಹಿ ಮಾಡಿರುತ್ತೇವೆ. ನನ್ನ ಸಮಕ್ಷಮ ದೊಣ್ಣೆ, ಮಚ್ಚು ಮತ್ತು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸಾಕ್ಷಿ ಮುದ್ದೆಮಾಲು 1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ  ಆರೋಪಿತರ ಪರ ವಕೀಲರಿಂದಃ</u>**

ಚಾಸಾ 1 ಮತ್ತು 2 ರವರ ನಮ್ಮ ಊರಿನವರು ಎಂದರೆ ಸರಿ. ಸ್ಥಳಕ್ಕೆ ಬರಬೇಕು ಎಂದು ಪೊಲೀಸರು ನೋಟಿಸ್ ಕೊಟ್ಟಿರುವುದಿಲ್ಲ. ನನಗೆ ಓದಲು ಬರೆಯಲು ಬರುವುದಿಲ್ಲ. ನಿಪಿ 2 ರಲ್ಲಿ ಇರುವ ವಿಚಾರ ಗೊತ್ತಿಲ್ಲ ಎಂದರೆ ಸರಿಯಲ್ಲ. ಮುದ್ದೆಮಾಲುಗಳನ್ನು ಯಾರು ಕೊಟ್ಟಿರುತ್ತಾರೆ ಎಂದರೆ ಪೊಲೀಸರು ಜಮೀನಿನಿಂದ ತೆಗೆದುಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಸ್ಥಳದಲ್ಲಿ ಇಬ್ಬರು ಇದ್ದು ಅವರ ಹೆಸರು ಗೊತ್ತಿಲ್ಲ. ನಾನು ನಿಪಿ 2 ಕ್ಕೆ ಪೊಲೀಸ್ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ 1 ರವರು ಒಂದೇ ಊರಿನವರು ಆಗಿದ್ದರಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮುದ್ದೆಮಾಲುಗಳನ್ನು ಯಾರು ಕೊಟ್ಟಿರುತ್ತಾರೆ ಎಂದರೆ ಪೊಲೀಸರು ತೆಗೆದುಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಮುದ್ದೆಮಾಲುಗಳ ಮೇಲೆ ನನ್ನ ಸಹಿ ಪಡೆದಿರುವುದಿಲ್ಲ. ಸ್ಥಳದ ಪೋಟೋ ತೆಗೆದಿರುವುದಿಲ್ಲ. ಸದರಿ ದಿನ ನಾನು ಸ್ಥಳದಲ್ಲಿ ಇರಲಿಲ್ಲ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**